# ಗ್ರಾಮೀಣ ಕ್ರೀಡೆಗಳಿಗೆ ಪ್ರೋತ್ಸಾಹ

**ಆನೇಕಲ್:** ಗ್ರಾಮೀಣ ಕ್ರೀಡೆಗಳನ್ನು ಪ್ರೋತ್ಸಾಹಿಸಲು ಕ್ರೀಡಾಕೂಟಗಳು ಪ್ರಮುಖ ಪಾತ್ರ ವಹಿಸುತ್ತವೆ. ಹಾಗೆಯೇ ಅಂತರ ವಿಶ್ವವಿದ್ಯಾಲಯಗಳ ಖೋಖೋ ಪಂದ್ಯಾವಳಿಯಿಂದಾಗಿ ವಿದ್ಯಾರ್ಥಿಗಳ ನಡುವೆ ಉತ್ತಮ ಬಾಂಧವ್ಯ ಬೆಳೆಯುತ್ತದೆ ಎಂದು ರಾಷ್ಟ್ರೀಯ ಕ್ರೀಡಾಪಟು ಶೋಭಾ ನಾರಾಯಣ್ ಹೇಳಿದರು. ಪಟ್ಟಣ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ ನಾಲ್ಕು ದಿನಗಳ ಅಂತರ ವಿಶ್ವವಿದ್ಯಾಲಯಮಟ್ಟದ ಮಹಿಳಾ ಖೋ ಖೋ ಪಂದ್ಯಾವಳಿಯನ್ನು ಸೋಮವಾರ ಉದ್ಘಾಟಿಸಿ ಮಾತನಾಡಿದರು. ಬೆಂಗಳೂರು ವಿಶ್ವವಿದ್ಯಾಲಯದ ಪ್ರೊ.ಸುಂದರ್ ರಾಜ್ ಅರಸ್ ಮಾತನಾಡಿ, ಪಂದ್ಯಾವಳಿ ಮೂಲಕ ಮಹಿಳಾ ಸಬಲೀಕರಣಕ್ಕೆ ಪ್ರೋತ್ಸಾಹ ನೀಡಲಾಗಿದೆ ಎಂದರು. ಅಲಯನ್ಸ್ ವಿಶ್ವವಿದ್ಯಾಲಯದ ಸಹ ಕುಲಪತಿಗಳಾದ ಅಭಯ್ ಚೆಬ್ಬಿ, ಡಾ.ಪುನೀತ್ ಕರಿಯಪ್ಪ, ಆಡಳಿತ ಮಂಡಳಿ ಸಿಬ್ಬಂದಿ ಶೈಲಾ ಚೆಬ್ಬಿ, ಸುರೇಖಾ ಶೆಟ್ಟಿ ಇದ್ದರು.



ಆನೇಕಲ್ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ ಖೋ ಖೋ ಪಂದ್ಯಾವಳಿಯಲ್ಲಿ ವಿದ್ಯಾರ್ಥಿಗಳು ಪಥಸಂಚಲನ ನಡೆಸಿದರು.